(3)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ಅಲ್ಪಸಂಖ್ಯಾತರ ಯುವಕರು/ಯುವತಿಯರಿಗೆ, ಕೌಶಲ್ಯ ಅಭಿವೃದ್ಧಿ (Skill Development) ಯೋಜನೆ.

ಓದಲಾಗಿದೆ:

(1) ನಿರ್ದೇಶಕರು, ಅಲ್ಪಸಂಖ್ಯಾತರ ಇಲಾಖೆರವರ ಪತ್ರ ಸಂಖ್ಯೆ: ಅಸಾಂನಿ:ಸೌ.ಅ.ಯೋ: ಸಿಆರ್-18:2006-07 ದಿನಾಂಕ:02-05-2006.

(2) ದಿನಾಂಕ:02-05-2006ರಂದು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಸಭೆ ನಿರ್ಣಯ.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ಇಲಾಖೆ ಇವರು 2006-07ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಯುವಕ/ಯುವತಿಯರಿಗೆ ಕೌಶಲ್ಯ ಅಭಿವೃದ್ಧಿ ಯೋಜನೆ ಎಂಬ ಹೊಸ ಯೋಜನೆಯನ್ನು ಜಾರಿಗೊಳಿಸಲು ಕೋರಿರುತ್ತಾರೆ. ಮೇಲೆ (2)ರಲ್ಲಿ ಹೇಳಿದ ಸಭೆಯಲ್ಲಿ ಈ ಪ್ರಸ್ತಾವನೆಯನ್ನು ಪರಿಶೀಲಿಸಿ, ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಹೊಸ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸಲು ನಿರ್ಧರಿಸಲಾಯಿತು. ಅದರನುಸಾರ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ನಿರುದ್ಯೋಗ ನಿವಾರಣಾ ಮತ್ತು ಅಲ್ಪಸಂಖ್ಯಾತರಲ್ಲಿ ಆರ್ಥಿಕವಾಗಿ ಹಿಂದುಳಿದಿರುವ ಯುವಕ/ಯುವತಿಯರಿಗೆ ತರಬೇತಿ/ಆರ್ಥಿಕ ಸ್ವಾಲಂಬನೆಯನ್ನು ನೀಡಲು ಈ ಯೋಜನೆ ರೂಪಿಸಲಾಗಿದೆ. ಈ ಯೋಜನೆಯಡಿಯಲ್ಲಿ ಜಿ.ಟಿ.ಟಿ.ಸಿ (Government Tool Room and Training Centre) ಹಾಗೂ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಗಳಲ್ಲಿ ನರ್ಸಿಂಗ್ ಹಾಗೂ ಆರೋಗ್ಯ ಕ್ಷೇತ್ರಕ್ಕೆ ಸಂಬಂಧಪಟ್ಟ ತರಬೇತಿಗಳು, ಗಗನ ಸಖಿ ತರಬೇತಿ, ವಿಮಾನ ಚಾಲನಾ ತರಬೇತಿ, ಕಂಪ್ಯೂಟರ್ ತರಬೇತಿ ಹಾಗೂ ತಂತ್ರಜ್ಞಾನ ಕ್ಷೇತ್ರಕ್ಕೆ ಸಂಬಂಧಪಟ್ಟ ತರಬೇತಿಗಳು, ಹೋಟೆಲ್ ಮ್ಯಾನೇಜ್‌ಮೆಂಟ್ ಕ್ಷೇತ್ರದ ತರಬೇತಿಗಳು, ಇನ್‌ಟೀರಿಯರ್ ಡೆಕೋರೇಷನ್, ಗಾರ್ಮೆಂಟ್ ಮತ್ತು ಫ್ಯಾಷನ್ ಡಿಸೈನಿಂಗ್ ಮತ್ತು ಇತರೆ ತರಬೇತಿಗಳನ್ನು, ಯುವಕ/ಯುವತಿಯರಲ್ಲಿ ಸೂಕ್ತ ಕೌಶಲ್ಯ ಬೆಳೆಸುವ ಉದ್ದೇಶದಿಂದ ಇತರ ತರಬೇತಿಗಳನ್ನು ನೀಡಲು ಈ ಕೆಳಕಂಡ ಆದೇಶ.

Ayesha
Keep in M.F

## ಸರ್ಕಾರಿ ಆದೇಶ ಸಂಖ್ಯೆ: ಸಕಇ 87 ಅಸಂಯೋ 2006(3)
## ಬೆಂಗಳೂರು, ದಿನಾಂಕ:09-08-2006.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿದೆ. ಅಲ್ಪಸಂಖ್ಯಾತರ ಯುವಕ/ಯುವತಿಯರಿಗೆ ನಿರುದ್ಯೋಗ ನಿವಾರಣೆ ಮತ್ತು ಆರ್ಥಿಕ ಸ್ವಾವಲಂಬನೆಯನ್ನು ಸಫಲಪಡಿಸುವ ಉದ್ದೇಶದಿಂದ, ಪ್ರಸ್ತಾವನೆಯಲ್ಲಿ ವಿವರಿಸಿದ ತರಬೇತಿಗಳಿಗೆ ಸೂಕ್ತ ಅಭ್ಯರ್ಥಿಗಳಿಗೆ ತರಬೇತಿ ನೀಡುವ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರವು ಈ ಮೂಲಕ ಅನುಮತಿ ನೀಡಿ, ಆದೇಶಿಸಿದೆ.

Today / Imp
(1) MF
(2) Put-up DO to all DOs BCM with copies for follow-up action.
Kamal 12/9/06